# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 62 (95)
ಮಾನ್ಯ ಸದಸ್ಯರ ಹೆಸರು: ಡಾ: ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು: ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ: 17.08.2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಗಡಿ ಭಾಗಗಳಲ್ಲಿ ವಿಶೇಷವಾಗಿ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನಲ್ಲಿ ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸುವ ಕುರಿತು ಸಾರ್ವಜನಿಕ ವಲಯದಲ್ಲಿ ವದಂತಿಗಳು ಹರಡುತ್ತಿರುವುದು ಸರ್ಕಾರಕ್ಕೆ ಬಂದಿದೆಯೇ: | ಬಂದಿರುವುದಿಲ್ಲ. |
| ಆ) | ಈ ವಿಷಯಕ್ಕೆ ಸಂಬಂಧಿಸಿದಂತೆ ಗಡಿ ಭಾಗದ ಸಾರ್ವಜನಿಕರು ಆತಂಕಕ್ಕೊಳಗಾಗಿ ಪ್ರತಿಭಟನೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ: | |
| ಇ) | ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸಲು ಸರ್ಕಾರವು ಯಾವುದಾದರೂ ಅಧಿಕೃತ ಆದೇಶ ಅಥವಾ ಸಚಿವ ಸಂಪುಟದಲ್ಲಿ ನಿರ್ಧಾರ ಕೈಗೊಂಡಿದೆಯೇ: | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಈ) | ಗಡಿ ಭಾಗದ ನಾಗರಿಕರ ಮಾತೃ ಭಾಷೆ ಮರಾಠಿಯಾಗಿರುವುದರಿಂದ ಮತ್ತು ಶೈಕ್ಷಣಿಕ/ ಸಾಮಾಜಿಕ ಕಾರಣಗಳಿಗಾಗಿ ಅವರಿಗೆ ಮರಾಠಿ ಭಾಷೆಯ ಜ್ಞಾನ ಅಗತ್ಯವಿರುವುದರಿಂದ ಈ ಶಾಲೆಗಳನ್ನು ಯಾಥಾಸ್ಥಿತಿಯಲ್ಲಿ ಮುಂದುವರಿಸಲು ಸರ್ಕಾರದ ನಿಲುವು ಏನು: | ಮರಾಠಿ ಮಾಧ್ಯಮ ಶಾಲೆಗಳನ್ನು ಯಥಾಸ್ಥಿಯಲ್ಲಿ ಮುಂದುವರಿಸಲಾಗುತ್ತಿದೆ. |
| ಉ) | ಕನ್ನಡ ಮಾಧ್ಯಮ ಶಾಲೆಗಳ ಅಗತ್ಯವಿದ್ದಲ್ಲಿ, ಅಸ್ತಿತ್ವದಲ್ಲಿರುವ ಮರಾಠಿ ಶಾಲೆಗಳನ್ನು ಪರಿವರ್ತಿಸಲು ಬದಲು ಹೊಸದಾಗಿ ಕನ್ನಡ ಮಾಧ್ಯಮ ಶಾಲೆಗಳನ್ನು ಸ್ಥಾಪಿಸುವ ಮೂಲಕ ಸಾರ್ವಜನಿಕರಿಗೆ ಆಯ್ಕೆಯ ಸ್ವಾತಂತ್ರ್ಯ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: | ಈ ರೀತಿಯ ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |

...2

| | | |
|---|---|---|
| ಊ) | ಈ ವಿಷಯದ ಕುರಿತು ಸಾರ್ವಜನಿಕರಲ್ಲಿ ಉಂಟಾಗಿರುವ ಗೊಂದಲವನ್ನು ಪರಿಹರಿಸಲು ಸರ್ಕಾರ ಸ್ಪಷ್ಟೀಕರಣ ನೀಡುವುದು: | ಅನ್ವಯಿಸುವುದಿಲ್ಲ. |

**ಸಂಖ್ಯೆ:ಇಪಿ 92 ಪಿಎಂಎ 2026**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು